LIBRARY
Bengaluru

# ಎನ್‌ಇಪಿಗೆ ವಿದ್ಯಾರ್ಥಿಗಳ ನಿರಾಸಕ್ತಿ

## ಅನುಷ್ಠಾನದಿಂದ ಬೋಧಕರಿಗೂ ಸಮಸ್ಯೆ । ಶುಲ್ಕ ಹೆಚ್ಚಳಕ್ಕೆ ವಿರೋಧ

■ **ವಿಕ ಸುದ್ದಿಲೋಕ** ಬೆಂಗಳೂರು

ರಾಷ್ಟ್ರೀಯ ಶಿಕ್ಷಣ ನೀತಿ-2023 (ಎನ್‌ಇಪಿ) ಅನುಷ್ಠಾನದಿಂದ ವಿದ್ಯಾರ್ಥಿಗಳು ಮತ್ತು ಬೋಧಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಕರ್ನಾಟಕ ಭಾರತ ಶಿಕ್ಷಣ ಉಳಿಸಿ ಸಮಿತಿ (ಎಐಇಎಸ್‌ಸಿ) ರಾಜ್ಯಾದ್ಯಂತ ಸಮೀಕ್ಷೆ ನಡೆಸಲಾಗಿದೆ.

ಈ ಸಮೀಕ್ಷೆಯಲ್ಲಿ ಶೇ.82.15ರಷ್ಟು ಖಾಸಗಿ, ಸ್ವಾಯತ್ತ, ಸರಕಾರಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಹಾಗೂ ಶೇ.94.5ರಷ್ಟು ಗ್ರಾಮೀಣ ಮತ್ತು ಸರಕಾರಿ ಕಾಲೇಜು ವಿದ್ಯಾರ್ಥಿಗಳು ಎನ್‌ಇಪಿ 4 ವರ್ಷಗಳ ಪದವಿ ವ್ಯಾಸಂಗವನ್ನು ನಿರಾಕರಿಸಿದ್ದಾರೆ.


ರಾಜ್ಯದ ಎಲ್ಲ ಪ್ರದೇಶಗಳನ್ನು ಒಳಗೊಂಡಂತೆ 24 ಜಿಲ್ಲೆಗಳು, 8 ವಿವಿಗಳು ಮತ್ತು 83 ಕಾಲೇಜುಗಳಲ್ಲಿ ಸಮೀಕ್ಷೆ ನಡೆಸಲಾಗಿದೆ. ಸರಕಾರಿ ಮತ್ತು ಖಾಸಗಿ ಕಾಲೇಜುಗಳ 2536 ವಿದ್ಯಾರ್ಥಿಗಳು ಹಾಗೂ ಬೋಧಕರು ಸಮೀಕ್ಷಾ ನಮೂನೆಯ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ್ದಾರೆ.

**ಬೋಧಕರು ಇಲ್ಲ:** ಎನ್‌ಇಪಿಯಲ್ಲಿ ವಿಷಯ ಆಯ್ಕೆಯ ಸ್ವಾತಂತ್ರ್ಯವಿದ್ದರೂ, ವಿಷಯ ಪರಿಣಿತ ಬೋಧಕರು ಇಲ್ಲವೆಂದು ಶೇ.81ರಷ್ಟು ಖಾಸಗಿ, ಸ್ವಾಯತ್ತ, ಸರಕಾರಿ ಮತ್ತು ಗ್ರಾಮೀಣ ಪ್ರದೇಶದ ಸರಕಾರಿ ಕಾಲೇಜುಗಳ ಶೇ.97.46ರಷ್ಟು ವಿದ್ಯಾರ್ಥಿಗಳು ಪ್ರತಿಕ್ರಿಯಿಸಿದ್ದಾರೆ.

ಎನ್‌ಇಪಿ ಅನ್ವಯ ಪ್ರಥಮ ಮತ್ತು ದ್ವಿತೀಯ ವರ್ಷದ ಪದವಿ ಮುಗಿಸಿ, ಕಾಲೇಜು ತೊರೆದರೆ ಈ ಅವಧಿಗೆ ನಿಗದಿಸಿರುವ ಪ್ರಮಾಣ ಪತ್ರವನ್ನು ನೀಡುವ ವ್ಯವಸ್ಥೆಯಿದೆ. ಆದರೆ, ಉದ್ಯೋಗ ಪಡೆಯುವುದು ಕಷ್ಟವಾಗಲಿದೆ ಎಂದು ಶೇ.88.5ರಷ್ಟು ವಿದ್ಯಾರ್ಥಿಗಳು ಮತ್ತು ಶೇ.96.32ರಷ್ಟು ಸರಕಾರಿ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ತಿಳಿಸಿದ್ದಾರೆ.

### ಆಯೋಗದ ಅಧ್ಯಕ್ಷರಿಗೆ ಸಮೀಕ್ಷಾ ವರದಿ

ಎನ್‌ಇಪಿ-2020ರ ಅವಸರದ ಅನುಷ್ಠಾನದಿಂದಾಗಿ ವಿದ್ಯಾರ್ಥಿಗಳ ಮೇಲೆ ಗಂಭೀರ ದುಷ್ಪರಿಣಾಮ ಬೀರಿದ್ದು, ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಎಐಇಎಸ್‌ಸಿ ಸಮಿತಿ ತಿಳಿಸಿದೆ. ರಾಜ್ಯ ಶಿಕ್ಷಣ ನೀತಿ ಆಯೋಗದ ಅಧ್ಯಕ್ಷರಿಗೆ ಸಮೀಕ್ಷಾ ವರದಿಯನ್ನು ಸಲ್ಲಿಸಿರುವ ಸಮಿತಿ ಅಧ್ಯಕ್ಷ ಪ್ರೊ.ಅಲ್ಲಮಪ್ರಭು ಬೆಟ್ಟದೂರು ಮತ್ತು ಉಪಾಧ್ಯಕ್ಷ ವಿ.ಎನ್. ರಾಜಶೇಖರ ಅವರು, ''ಸಮೀಕ್ಷೆ ನಡೆಸಿರುವ ನಮ್ಮ ಸಮಿತಿಯು ಪ್ರಜಾಸತ್ತಾತ್ಮಕವಾದ ಸಂಘಟನೆಯಾಗಿದ್ದು, ಪ್ರಖ್ಯಾತ ಶಿಕ್ಷಣ ತಜ್ಞರು, ನಿವೃತ್ತ ಕುಲಪತಿಗಳು ಮತ್ತು ಶೈಕ್ಷಣಿಕ ಸಾಧಕರನ್ನು ಒಳಗೊಂಡಿದೆ. 3 ವರ್ಷಗಳಿಂದ ರಾಜ್ಯದಲ್ಲಿ ಎನ್‌ಇಪಿ-2020 ಅನುಷ್ಠಾನವು ನಮ್ಮ ಶಿಕ್ಷಣ ವ್ಯವಸ್ಥೆ ಮತ್ತು ಶಿಕ್ಷಣದ ಗುಣಮಟ್ಟದ ಮೇಲೆ ಸರಿಪಡಿಸಲಾಗದ ರೀತಿಯಲ್ಲಿ ಹಾನಿ ಮಾಡಿರುವುದು ಈ ಸಮೀಕ್ಷೆಯ ಮೂಲಕ ತಿಳಿದು ಬಂದಿದೆ. ಅದರಲ್ಲೂ ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿನಿಯರು ತೊಂದರೆಗೊಳಗಾಗಿದ್ದಾರೆ. ಬಡ ವಿದ್ಯಾರ್ಥಿಗಳಿಗೂ ಉನ್ನತ ಶಿಕ್ಷಣದ ಬಾಗಿಲು ತೆರೆಯಬೇಕಿದ್ದು, ನಮ್ಮ ಶಿಕ್ಷಣವು ವೈಜ್ಞಾನಿಕ ಮತ್ತು ಜಾತ್ಯಾತೀತವಾಗಿರಬೇಕು ಎಂದು ಶಿಫಾರಸು ಮಾಡಲಾಗಿದೆ,'' ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಖಾಸಗಿ, ಸ್ವಾಯತ್ತ, ಸರಕಾರಿ ಕಾಲೇಜುಗಳ ಶೇ.86.78ರಷ್ಟು ವಿದ್ಯಾರ್ಥಿಗಳು ಮತ್ತು ಶೇ.98.5ರಷ್ಟು ಸರಕಾರಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಬೋಧನಾ ಶುಲ್ಕದ ಏರಿಕೆ ಕುರಿತು ಅಸಮಾಧಾನ ಹೊರಹಾಕಿದ್ದಾರೆ. ಶಿಕ್ಷಣಕ್ಕೆ ಹೆಚ್ಚಿನ ಅನುದಾನ ನೀಡಬೇಕು. ಅತಿಥಿ ಉಪನ್ಯಾಸಕರ ಸೇವೆಯನ್ನು ಕ್ರಮಬದ್ಧಗೊಳಿಸಬೇಕು ಮತ್ತು ಖಾಲಿಯಿರುವ ಬೋಧಕರ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಬೇಕೆಂದು ಶೇ.87.43 ವಿದ್ಯಾರ್ಥಿಗಳು ಮತ್ತು ಶೇ.97.98ರಷ್ಟು ಗ್ರಾಮೀಣ ಭಾಗದ ಸರಕಾರಿ ಕಾಲೇಜು ವಿದ್ಯಾರ್ಥಿಗಳು ಸಮೀಕ್ಷೆಯಲ್ಲಿ ತಿಳಿಸಿದ್ದಾರೆ.